# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನಸಾಗರ ಆವರಣ, ಬಳ್ಳಾರಿ-583105

# VIJAYANAGARA SRI KRISHNADEVARAYA UNIVERSITY

"Jnana Sagar" Campus, Ballari-583 105

ಕುಲಸಚಿವರು ಫೊ.ನಂ.08392-242093

Web:www.vskub.ac.in


ಸಂಖ್ಯೆ:ವಿ.ಶ್ರೀ.ಕೃ.ವಿ.ವಿ.ಬ/ಕಾ.ಅ.ಮಂ/ಸಂಯೋಜನೆ/ಅಧಿಸೂಚನೆ/2022-23/ 15 ದಿನಾಂಕ:16.05.2022

## ಅಧಿಸೂಚನೆ ಪ್ರಕಟಣೆ

**ವಿಷಯ:** 2022-2023ನೇ ಶೈಕ್ಷಣಿಕ ಸಾಲಿಗೆ ಆನ್‌ಲೈನ್ ಮುಖಾಂತರ ಸಂಯೋಜನಾ ಅರ್ಜಿ ಆಹ್ವಾನಿಸುವ ಕುರಿತು.

**ಉಲ್ಲೇಖ:** 01. ಸರ್ಕಾರದ ಆದೇಶ ಸಂಖ್ಯೆ:ಇಡಿ 34 ಇಜಿಓವಿ2020 (ಭಾಗ-2) ಬೆಂಗಳೂರು ದಿನಾಂಕ:26.04.2022

02. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:16.05.2022

*****

ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ವ್ಯಾಪ್ತಿಯ ಬಳ್ಳಾರಿ, ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ ಕಲಾ, ವಿಜ್ಞಾನ, ವಾಣಿಜ್ಯ, ಶಿಕ್ಷಣ ಮತ್ತು ದೈಹಿಕ ಶಿಕ್ಷಣ ಹಾಗೂ ಇನ್ನಿತರ ಸಾಂಪ್ರದಾಯಿಕ ವಿಷಯಗಳಲ್ಲಿ ಹೊಸ ಪದವಿ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲು ಇಚ್ಛಿಸುವ ಸರ್ಕಾರದ ನಿಯಮಾವಳಿಯಂತೆ ನೋಂದಾಯಿಸಲ್ಪಟ್ಟ ಸಂಘ ಸಂಸ್ಥೆಗಳು/ ಸಾರ್ವಜನಿಕ ಟ್ರಸ್ಟ್‌ಗಳಿಂದ ಹೊಸ ಸಂಯೋಜನಾ ಅರ್ಜಿಗಳು ಹಾಗೂ ಪ್ರಸ್ತುತ ವಿಶ್ವವಿದ್ಯಾಲಯದಿಂದ ಸಂಯೋಜನೆ ಹೊಂದಿರುವ ಮಹಾವಿದ್ಯಾಲಯಗಳಿಂದ ಸ್ನಾತಕ/ ಸ್ನಾತಕೋತ್ತರ ಕೋರ್ಸ್‌ಗಳಿಗೆ ಮುಂದುವರಿಕೆ/ ವಿಸ್ತರಣೆ/ ಹೊಸ ಕೋರ್ಸ್/ ಹೊಸ ವಿಷಯ/ ಪ್ರವೇಶ ಮಿತಿ ಹೆಚ್ಚಳ/ ಶಾಶ್ವತ ಸಂಯೋಜನೆ/ ಶಾಶ್ವತ ಸಂಯೋಜನೆ ನವೀಕರಣ/ ಮಹಾವಿದ್ಯಾಲಯಗಳ ಹೆಸರು ಬದಲಾವಣೆ/ಮಹಾವಿದ್ಯಾಲಯ ಸ್ಥಳಾಂತರ/ಆಡಳಿತ ಮಂಡಳಿ ಬದಲಾವಣೆ ಹಾಗೂ ಇತ್ಯಾದಿಗಳಿಗಾಗಿ ಸಂಬಂಧಿಸಿದ ದಾಖಲೆಗಳೊಂದಿಗೆ ನಿಗದಿತ ಸಂಯೋಜನಾ ಶುಲ್ಕವನ್ನು ಪಾವತಿಸಿ ಸರ್ಕಾರದ ಸಂಯೋಜನೆಗೆ ಸಂಬಂಧಿಸಿದ ಜಾಲತಾಣ (website) ವಿಳಾಸ **https://www.onlineaffiliation.karnataka.gov.in/Affiliation22_23/** ರ ಮೂಲಕ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಸಂಯೋಜನ ಶುಲ್ಕಗಳ ವಿವರ ಹಾಗೂ ಸಂಯೋಜನೆಗೆ ಸಂಬಂಧಿಸಿದ ಇನ್ನಿತರ ಮಾಹಿತಿಯನ್ನು ವಿಶ್ವವಿದ್ಯಾಲಯದ ಜಾಲತಾಣ ವಿಳಾಸ (website: www.vskub.ac.in) ದಲ್ಲಿ ನೋಡಬಹುದು. ಸಂಯೋಜನಾ ಶುಲ್ಕವನ್ನು ವಿಶ್ವವಿದ್ಯಾಲಯದ ಜಾಲತಾಣದಲ್ಲಿ online payment gateway ಮೂಲಕ ಪಾವತಿಸಬೇಕು.

ಮುಂದುವರೆದು, ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಪ್ರತಿ ಪಡೆದು ಶುಲ್ಕ ಭರಿಸಿದ್ದರ ಬಗ್ಗೆ ರಸೀದಿ ಮತ್ತು ಸಂಪೂರ್ಣ ದಾಖಲೆಗಳೆಲ್ಲವುಗಳನ್ನು ಬೈಂಡಿಂಗ್/ಸ್ಪೈರಲ್ ಬೈಂಡಿಂಗ್ ಮಾಡಿಸಿ ಎರಡು ಪ್ರತಿಗಳನ್ನು **ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ,** ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಜ್ಞಾನಸಾಗರ ಆವರಣ, ಬಳ್ಳಾರಿ-583105 ಇವರಿಗೆ ಈ ಕೆಳಗೆ ಸೂಚಿಸಿರುವ ದಿನಾಂಕದೊಳಗೆ ಸಲ್ಲಿಸಲು ತಿಳಿಸಲಾಗಿದೆ.

| | | |
|---|---|---|
| 1. | **ದಂಡ ರಹಿತ ಕೊನೆಯ ದಿನಾಂಕ** | 06.06.2022 |
| 2. | **ರೂ.20,000/-ದಂಡ ಶುಲ್ಕದೊಡನೆ** | 07.06.2022 ರಿಂದ 11.06.2022 |
| 3. | **ರೂ.40,000/- ದಂಡ ಶುಲ್ಕದೊಡನೆ** | 13.06.2022 ರಿಂದ 18.06.2022 |

**ದಿನಾಂಕ: 18.06.2022** ರ ನಂತರ ಬಂದ ಸಂಯೋಜನಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಯಾವುದೇ ಕಾರಣಕ್ಕೂ ಸಂಯೋಜನಾ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಅವಕಾಶವಿರುವುದಿಲ್ಲ.

ಕುಲಸಚಿವರು
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ
ಬಳ್ಳಾರಿ